**ಎಂ.ವಿ.ಸಿ. 1390/2022 ಪಿಡಬ್ಲ್ಯೂ.1**

**ಸಾಕ್ಷಿಯನ್ನು ದಿಃ 17.10.2023 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು**

**ಮುಂದುವರಿದ ಮುಖ್ಯ ವಿಚಾರಣೆಃ ಅರ್ಜಿದಾರರ ಪರ ವಕೀಲರಿಂದಃ**

ಪ್ರಕರಣ ಸಂಖ್ಯೆ 65/2022 ರಲ್ಲಿನ ಪ್ರಥಮ ವರ್ತಮಾನ ವರದಿ, ಸ್ಥಳ ಪಂಚನಾಮೆ, ವಾಹನ ಪರೀಕ್ಷಾ ವರದಿ ಹಾಗೂ ಕಲಂ 163 ರಡಿಯಲ್ಲಿ ಪೊಲೀಸರು ದಾಖಲಿಸಿದ್ದ ಹೇಳಿಕೆಗಳು, ಅಂತಿಮ ವರದಿಯ ದೃಢೀಕೃತ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿಪಿ.1 ಎಂದು ಗುರುತಿಸಲಾಯಿತು. ಗಾಯದ ಪ್ರಮಾಣಪತ್ರಗಳನ್ನು ಹಾಜರುಪಡಿಸಿದ್ದು ನಿಪಿ.2 ಎಂದು, 3 ಸಲಹಾ ಚೀಟಿ ಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿಪಿ.3 ಎಂದು, 16 ವೈದ್ಯಕೀಯ ರಶೀದಿಗಳಿರುವ ಪುಸ್ತಕವನ್ನು ಹಾಜರುಪಡಿಸಿದ್ದು ಅದನ್ನು ಒಟ್ಟಾಗಿ ನಿಪಿ.4 ಎಂದು, ಬಿಡುಗಡೆ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ.5 ಎಂದು, 19 ಪ್ರಯೋಗಾಲಯ ವರದಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿಪಿ.6 ಎಂದು, ನನ್ನ ಆಧಾರ್ ಕಾರ್ಡ್, ಪಾನ್ ಕಾರ್ಡ್ ಹಾಗೂ ಬ್ಯಾಕ್ ಪಾಸ್ ಪುಸ್ತಕಗಳ ದೃಢಿಕೃತ ನಕಲುಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ.7, ನಿಪಿ.8, ನಿಪಿ.9 ಎಂದು, ಗುರುತಿಸಲಾಯಿತು.

**ಪಾಟೀ ಸವಾಲುಃ ಎದುರುದಾರರ ಪರ ವಕೀಲರಿಂದಃ**

ಎದುರುದಾರರ ಪರ ವಕೀಲರು ಪಾಟೀ ಸವಾಲಿಗೆ ಕಾಲಾವಕಾಶ ಕೋರಿದ್ದು, ಕಾಲಾವಕಾಶ ನೀಡಿ ಮುಂದೂಡಲಾಯಿತು.

**(ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಿದೆ)**

**ಸಾ ಓ ಹೇ ಸ ಒ**

(ಎಂ.ಮಂಜುನಾಥ)

**ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು**
**ಪಾಂಡವಪುರ**